# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 512 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19/07/2024 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಒಂದು ವರ್ಷದಲ್ಲಿ ಎಷ್ಟು ಜನ ಕಟ್ಟಡ ನಿರ್ಮಾಣ ಕಾರ್ಮಿಕರನ್ನು ನೋಂದಣಿ ಮಾಡಲಾಗಿದೆ; (ಪೂರ್ಣ ಮಾಹಿತಿ ನೀಡುವುದು). | ದಿನಾಂಕ: 01-04-2023 ರಿಂದ 31-03-2024 ರವರೆಗೆ ಕಳೆದ ಒಂದು ವರ್ಷದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ 4,27,284 ಕಾರ್ಮಿಕರು ನೊಂದಣಿಯಾಗಿದ್ದು ಪ್ರಸ್ತುತ 38.52 ಲಕ್ಷ ಕಾರ್ಮಿಕರ ಸದಸ್ಯತ್ವವು ಚಾಲ್ತಿಯಲ್ಲಿರುತ್ತದೆ. ವಿವರಗಳನ್ನು **ಸಿಡಿ** ಯಲ್ಲಿ ಲಗತ್ತಿಸಿದೆ. |
| ಆ) | ಕರ್ನಾಟಕ ಕಾರ್ಮಿಕ ಮಂಡಳಿಯಲ್ಲಿ ಒಟ್ಟು ಎಷ್ಟು ಜನರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. (ಸಂಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯ ಕೇಂದ್ರ ಕಛೇರಿಯಲ್ಲಿ ವಿವಿಧ ಇಲಾಖೆಗಳಿಂದ ನಿಯೋಜನೆ ಮೇರೆಗೆ ಬಂದಿರುವ ಒಟ್ಟು 23 ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br>ಹೊರಗುತ್ತಿಗೆ ಆಧಾರದ ಮೇಲೆ ಕೇಂದ್ರ ಕಛೇರಿ ಮತ್ತು ಕ್ಷೇತ್ರ ಮಟ್ಟದ ಕಛೇರಿಗಳಲ್ಲಿ ಒಟ್ಟು 573 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ವಿವರಗಳನ್ನು **ಅನುಬಂಧ-01** ರಲ್ಲಿ ಸಲ್ಲಿಸಿದೆ. |
| ಇ) | ನೋಂದಾವಣೆಯಾಗಿರುವ ಕಟ್ಟಡ ಕಾರ್ಮಿಕರಿಲ್ಲದೇ ಬಹಳಷ್ಟು ಕಟ್ಟಡಗಳ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನೋಂದಣಿಯಾಗಿರುವ ಕಟ್ಟಡ ಕಾರ್ಮಿಕರಿಂದಲೇ ಕಟ್ಟಡಗಳನ್ನು ನಿರ್ಮಾಣ ಮಾಡಬೇಕೆಂಬ ಪ್ರಾವಧಾನಗಳು ಕಾಯ್ದೆ ಮತ್ತು ನಿಯಮಗಳಲ್ಲಿ ಇರುವುದಿಲ್ಲ. ಆದರೆ, ಮಂಡಳಿಯು ನಿರಂತರವಾಗಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಕಟ್ಟಡ ಕಾರ್ಮಿಕರನ್ನು ನೋಂದಾಯಿಸಲು ಕ್ರಮ ವಹಿಸುತ್ತಿದೆ. ಇದಲ್ಲದೇ ದಿನಾಂಕ: 02-02-2024 ರಿಂದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಅವರು ಕೆಲಸ ನಿರ್ವಹಿಸುವ ಸ್ಥಳದಲ್ಲಿಯೇ ನೋಂದಾಯಿಸಲು "ನೋಂದಣಿ ಅಭಿಯಾನವನ್ನು" ಕೂಡ ಅನುಷ್ಠಾನಗೊಳಿಸಲಾಗಿದೆ. ಇದರಿಂದಾಗಿ ಪ್ರಸ್ತುತ 13,097 ಕಾರ್ಮಿಕರನ್ನು ನೋಂದಾಯಿಸಲಾಗಿದೆ. |
| ಈ) | ಬಂದಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಯಾವ ರೀತಿಯ ಕಠಿಣ ಕ್ರಮಗಳನ್ನು ಕೈಗೊಂಡಿದೆ; | |

| | | |
|---|---|---|
| **ಉ)** | ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ಯಾವ್ಯಾವ ರೀತಿಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಹಾಗೂ ಹೊಸದಾಗಿ ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ? | ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ವಿತರಿಸುತ್ತಿರುವ ಸೌಲಭ್ಯಗಳ ವಿವರ ವನ್ನು **ಅನುಬಂಧ -02ರಲ್ಲಿ** ಲಗತ್ತಿಸಿದೆ.<br><br>ಮಂಡಳಿಯ ಆಯವ್ಯಯದಲ್ಲಿ ಪ್ರಸ್ತಾಪಿಸಿರುವ ಮತ್ತು ಅನುಮೋದಿತ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದ್ದು, 2024-25 ನೇ ಸಾಲಿನಲ್ಲಿ ಪ್ರಸ್ತುತ ಜಾರಿಯಲ್ಲಿರುವ ಯೋಜನೆಗಳನ್ನು ಮುಂದುವರಿಸಲಾಗುವುದು. |

**ಕಾಇ 203 ಎಲ್ ಇಟಿ 2024**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

## ಅನುಬಂಧ-01

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 512**

**ಮಂಡಳಿಯಲ್ಲಿ ಕಾರ್ಯನಿರ್ವಸುತ್ತಿರುವ ಅಧಿಕಾರಿಗಳ ವಿವಿರ;**

| ಕ್ರ. ಸಂ | ದರ್ಜೆ | ಅಧಿಕಾರಿಗಳ ಸಂಖ್ಯೆ | ವಿವರ |
|---|---|---|---|
| 1. | ಗ್ರೂಪ್ 'ಎ' | 9 | ಕಾರ್ಯದರ್ಶಿ-01<br>ಜಂಟಿ ಕಾರ್ಯದರ್ಶಿ-01<br>ಉಪ ಕಾರ್ಯದರ್ಶಿ-03<br>ವಿಶೇಷಾಧಿಕಾರಿ-01<br>ಸಹಾಯಕ ಕಾರ್ಯದರ್ಶಿ-01<br>ಸಹಾಯಕ ಕಾರ್ಯಪಾಲಕ ಅಭಿಯಂತರರು-01<br>ಸಹಾಯಕ ನಿಯಂತ್ರಕರು-01 |
| 2. | ಗ್ರೂಪ್ 'ಬಿ' | 07 | ಕಾರ್ಮಿಕ ಅಧಿಕಾರಿಗಳು-06<br>ಲೆಕ್ಕಾಧೀಕ್ಷಕರು-01 |
| 3. | ಗ್ರೂಪ್ 'ಸಿ' | 07 | ಹಿರಿಯ ಕಾರ್ಮಿಕ ನಿರೀಕ್ಷಕರು-07 |
| **ಒಟ್ಟು** | | **23** | |

## ಹೊರಗುತ್ತಿಗೆ ಸಿಬ್ಬಂದಿಗಳು

| ಕ್ರ, ಸಂ | ಹುದ್ದೆಯ ವಿವರ | ಸಂಖ್ಯೆ |
|---|---|---|
| 1 | ಡೆಸ್ಕ್ ಆಫೀಸರ್ | 04 |
| 2 | ಜೂನಿಯರ್ ಡೆಸ್ಕ್ ಆಫೀಸರ್ | 05 |
| 3 | ಸೀನಿಯರ್ ಅಸಿಸ್ಟೆಂಟ್ | 23 |
| 4 | ಜೂನಿಯರ್ ಅಸಿಸ್ಟೆಂಟ್ | 13 |
| 5 | ಸ್ಟೆನೋ/ಪಿ.ಎ | 01 |
| 6 | ಜೂನಿಯರ್ ಇಂಜಿನಿಯರ್ | 03 |
| 7 | ಅಸಿಸ್ಟೆಂಟ್ ಪ್ರೋಗ್ರಾಮರ್ | 05 |
| 8 | ಸಿವಿಲ್ ಇಂಜಿನಿಯರ್ | 03 |
| 9 | ನೆಟ್ವರ್ಕ್ ಅಡ್ಮಿನಿಸ್ಟ್ರೇಟರ್ | 01 |
| 10 | ಸಿಸ್ಟಮ್ ಅನಾಲಿಸ್ಟ್ | 01 |
| 11 | ಪ್ರಾಜೆಕ್ಟ್ ಕೋ-ಆರ್ಡಿನೇಟರ್ | 01 |
| 12 | ಸೋಷಿಯಲ್ ಮೀಡಿಯಾ ಪ್ರೋಮೋಟರ್ | 01 |
| 13 | ಫೀಲ್ಡ್ ಎಕ್ಸಿಕ್ಯೂಟಿವ್ | 54 |
| 14 | ಪೀಲ್ಡ್ ಡಾಟಾ ಎಂಟ್ರಿ ಆಪರೇಟರ್ | 422 |
| 15 | ಹೌಸ್ ಕೀಪಿಂಗ್ | 6 |
| 16 | ಗ್ರೂಪ್ ಡಿ | 12 |
| 17 | ವಾಹನ ಚಾಲಕರು | 08 |
| 18 | ಭದ್ರತಾ ಸಿಬ್ಬಂದಿ | 10 |
| **ಒಟ್ಟು** | | **573** |

# ಅನುಬಂಧ-02

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 512**

**ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ವಿತರಿಸುತ್ತಿರುವ ಸೌಲಭ್ಯಗಳ ವಿವರ;**

1. ನೋಂದಾಯಿತ ಫಲಾನುಭವಿಯ ಪ್ರಥಮ ಮತ್ತು ದ್ವಿತೀಯ ಪಿಯುಸಿ ಒದುತ್ತಿರುವ ಮಕ್ಕಳಿಗೆ 2023-24 ಸಾಲಿನಲ್ಲಿ ಲ್ಯಾಪ್ ಟಾಪ್ ವಿತರಣೆ ಮಾಡಲಾಗಿದೆ.

2. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 1 | 1 ರಿಂದ 5 ನೇ ತರಗತಿ | 1,800 |
| 2 | 6 ರಿಂದ 8 ನೇ ತರಗತಿ | 2,400 |
| 3 | 9 ಹಾಗೂ 10ನೇ ತರಗತಿ | 3,000 |
| 4 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 4,600 |
| 5 | ಪದವಿ | 10,000 |
| 6 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | 10,000 |
| 7 | ಸ್ನಾತಕೋತ್ತರ ಪದವಿ | 10,000 |
| 8 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 4,600 |
| 9 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ / ಆಕ್ಸುಲರಿ ನರ್ಸಿಂಗ್ ಆಂಡ್ ಮಿಡ್ವೈಫ್ | 10,000 |
| 10 | ಬಿ.ಎಡ್ | 6,000 |
| 11 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ ಎಸ್/ ಬಿಡಿಎಸ್ /ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | 11,000 |
| 12 | ಎಲ್‌ಎಲ್ ಬಿ/ಎಲ್ ಎಲ್ ಎಂ | 10,000 |
| 13 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | 10,000 |
| 14 | ಎಮ್‌ಡಿ ಮೆಡಿಕಲ್ | 12,000 |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | 11,000 |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್ ಇಆರ್/ಎಐಐಎಮ್‌ಎಸ್/ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | 11,000 |